ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು–1

ಸಂಖ್ಯೆ:ಹೆಚ್.ಆರ್.ಎಂ.ಎಸ್/ಪ.ವೇ–1/18–19 ದಿನಾಂಕ:18.07.2018

**<u>ಸುತ್ತೋಲೆ</u>**

ವಿಷಯ: 6ನೇ ಪರಿಷ್ಕೃತ ವೇತನ–2018ಕ್ಕೆ ಸಂಬಂಧಿಸಿದಂತೆ ಹೆಚ್.ಆರ್.ಎಂ.ಎಸ್ ವಿಭಾಗ, ಬಹುಮಹಡಿಗಳ ಕಟ್ಟಡ ರವರಿಂದ ವಿಡಿಯೋ ಕಾನ್ಫರೆನ್ಸ್ ಆಯೋಜಿಸುವ ಬಗ್ಗೆ.

ಉಲ್ಲೇಖ: ಯೋಜನಾ ನಿರ್ದೇಶಕರು, ಹೆಚ್.ಆರ್.ಎಂ.ಎಸ್. ವಿಭಾಗ, ಬಹು ಮಹಡಿಗಳ ಕಟ್ಟಡ, ಇವರ ಇ–ಮೇಲ್ ದಿ:17.07.2018.

&&&

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 06 ಎಸ್‌ಆರ್‌ಪಿ 2018 ಬೆಂಗಳೂರು ದಿ:01.03.2018 ರನ್ವಯ 6ನೇ ಪರಿಷ್ಕೃತ ವೇತನ–2018 ಅನ್ನು ಅನುಷ್ಠಾನಗೊಳಿಸಲಾಗಿದ್ದು, ಹೆಚ್.ಆರ್.ಎಂ.ಎಸ್. ತಂತ್ರಾಂಶದಲ್ಲಿ ಅಳವಡಿಸಲು ಕ್ರಮವಹಿಸಲಾಗುತ್ತಿದೆ. ಅದರಂತೆ ಶಿಕ್ಷಣ ಇಲಾಖೆಯ ನೌಕರರ ಪರಿಷ್ಕೃತ ವೇತನವನ್ನು ಹೆಚ್.ಆರ್.ಎಂ.ಎಸ್. ತಂತ್ರಾಂಶದಲ್ಲಿ ಅಳವಡಿಸಿಕೊಳ್ಳುವಲ್ಲಿ ವೇತನ ಬಟವಾಡೆ ಅಧಿಕಾರಿಗಳಿಗೆ ಯೋಜನಾ ನಿರ್ದೇಶಕರು, ಹೆಚ್.ಆರ್.ಎಂ.ಎಸ್ ವಿಭಾಗ, ಬಹುಮಹಡಿಗಳ ಕಟ್ಟಡ ಇವರ ವತಿಯಿಂದ ದಿ:13.07.2018ರಂದು ಎಲ್ಲಾ ಜಿಲ್ಲಾ ಹಂತದ ಡಿಡಿಓಗಳಿಗೆ ವಿಡಿಯೋ ಕಾನ್ಫರೆನ್ಸ್ ಆಯೋಜಿಸಲಾಗಿತ್ತು.

ದಿನಾಂಕ:20.07.2018 ರಂದು ಮತ್ತೊಮ್ಮೆ ಶಿಕ್ಷಣ ಇಲಾಖೆಗೆ ವಿಡಿಯೋ ಕಾನ್ಫರೆನ್ಸ್ ನಡೆಸುವಂತೆ ಕೋರಿದ್ದು, ಈ ದಿನ ಬೆಳಿಗ್ಗೆ 11.00 ರಿಂದ 1.30 ರವರೆಗೆ ವಿಡಿಯೋ ಕಾನ್ಫರೆನ್ಸ್ ಆಯೋಜಿಸಲಾಗಿದೆ. ಆದ್ದರಿಂದ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರುಗಳು ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿನ ಹೆಚ್.ಆರ್.ಎಂ.ಎಸ್ ಜ್ಞಾನವುಳ್ಳ ವೇತನ ಬಟವಾಡೆ ಅಧಿಕಾರಿಗಳು ಮತ್ತು ವಿಷಯ ನಿರ್ವಾಹಕರನ್ನು ನಿಯೋಜಿಸಿ ತಮ್ಮ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿಯ receiving centre ಗಳಲ್ಲಿ ಕನಿಷ್ಠ 30 ಮಂದಿ ಹಾಜರಿರುವಂತೆ ಕ್ರಮವಹಿಸುವುದು ಹಾಗೂ ಪರಿಷ್ಕೃತ ವೇತನ ಶ್ರೇಣಿಯನ್ನು ಅಳವಡಿಸುವಾಗ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಚರ್ಚಿಸಿ ಪರಿಹರಿಸಿಕೊಳ್ಳಲು ಕ್ರಮವಹಿಸುವುದು.

<u>ಭಾಗವಹಿಸುವವರು ಈ ಕೆಳಗಿನ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವುದು.</u>

1. ಹೆಚ್.ಆರ್.ಎಂ.ಎಸ್. ನೋಡಲ್ ಅಧಿಕಾರಿಗಳು ಮತ್ತು ಹೆಚ್.ಆರ್.ಎಂ.ಎಸ್. ತಂತ್ರಾಂಶ ಬಳಸುತ್ತಿರುವ ನುರಿತ ವೇತನ ಬಟವಾಡೆ ಅಧಿಕಾರಿಗಳು ಮತ್ತು ವಿಷಯ ನಿರ್ವಾಹಕರು ಮಾತ್ರ ಭಾಗವಹಿಸುವುದು.
2. ಪ್ರತಿ ತಾಲ್ಲೂಕಿನಿಂದ ಕನಿಷ್ಠ 5 ಮಂದಿ ಕಡ್ಡಾಯವಾಗಿ ಹಾಜರಾಗುವುದು.
3. ಚರ್ಚಿಸುವ ವಿಷಯ ಪುನರಾವರ್ತಿತವಾಗದಂತೆ ನೋಡಿಕೊಳ್ಳುವುದು.
4. ಚರ್ಚಿಸುವ ಸಮಸ್ಯೆಗೆ ಸಂಬಂಧಿಸಿದ ನಿಖರವಾದ ಮಾಹಿತಿ ತಮ್ಮ ಬಳಿ ಇರುವಂತೆ ನೋಡಿಕೊಳ್ಳುವುದು.
5. ಸಮಯಾವಕಾಶ ಬಹಳ ಕಡಿಮೆ ಇರುವುದರಿಂದ ಇದರ ಸದುಪಯೋಗಪಡಿಸಿಕೊಳ್ಳುವುದು.
6. ಪರಿಷ್ಕೃತ ವೇತನ ಶ್ರೇಣಿಗೆ ಸಂಬಂಧಿಸಿದ ಸಮಸ್ಯೆಗಳನ್ನು ವಿಡಿಯೋ ಕಾನ್ಫರೆನ್ಸ್‌ನಲ್ಲಿ ಭಾಗವಹಿಸಿದ ಅಧಿಕಾರಿಗಳು/ನೌಕರರ ಮೂಲಕ ಬಗೆಹರಿಸಿಕೊಳ್ಳಲು ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಕ್ರಮಕೈಗೊಳ್ಳುವುದು.
7. ವಿಡಿಯೋ ಕಾನ್ಫರೆನ್ಸ್‌ನಲ್ಲಿ ಭಾಗವಹಿಸಿದವರ ಮಾಹಿತಿಯನ್ನು ಈ ಕೆಳಕಂಡ ನಮೂನೆಯಲ್ಲಿ hrmsnodal@gmail.com ಗೆ ಕಳುಹಿಸಲು ತಿಳಿಸಿದೆ.

<u>ನಮೂನೆ</u>

ಜಿಲ್ಲೆಯ ಹೆಸರು:

| ಕ್ರಸಂ | ಹೆಸರು | ಪದನಾಮ ಮತ್ತು ವಿಳಾಸ | ಮೊಬೈಲ್ ಸಂಖ್ಯೆ | ಇ–ಮೇಲ್ ವಿಳಾಸ |
|---|---|---|---|---|
| | | | | |
| | | | | |

[ಕೆ.ಬಿ.ಅಂಜನಪ್ಪ] 18/7

ಅಪರ ನಿರ್ದೇಶಕರು[ಆ]

18/7

ಗೆ:

*01.* ರಾಜ್ಯ ಯೋಜನಾ ನಿರ್ದೇಶಕರು, ಎಸ್.ಎಸ್.ಎ/ಆರ್.ಎಂ.ಎಸ್.ಎ, ಬೆಂಗಳೂರು ರವರಿಗೆ ವಂದನೆಗಳೊಂದಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

*02.* ಅಪರ ಆಯುಕ್ತರು, ಅಪರ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ವಿಭಾಗ, ಧಾರವಾಡ ರವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

*03.* ಅಪರ ಆಯುಕ್ತರು, ಅಪರ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ, ಕಲಬುರಗಿ ರವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

*04.* ನಿರ್ದೇಶಕರು ಡಿ.ಎಸ್.ಇ.ಆರ್.ಟಿ., ಬೆಂಗಳೂರು ರವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

*05.* ನಿರ್ದೇಶಕರು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.

*06.* ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.

*07.* ಎಲ್ಲಾ ಉಪನಿರ್ದೇಶಕರು [ಆಡಳಿತ] ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.

*08.* ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.

*09.* ಹಿರಿಯ ಸಹಾಯಕ ನಿರ್ದೇಶಕರು, ಸಿಬ್ಬಂದಿ–1.ಎ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

*10.* ಸಹಾಯಕ ನಿರ್ದೇಶಕರು, ಕಛೇರಿ ಸಿಬ್ಬಂದಿ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

*11.* ಎಲ್ಲಾ ಮುಖ್ಯೋಪಾಧ್ಯಾಯರುಗಳು, ಸರ್ಕಾರಿ ಪ್ರೌಢಶಾಲೆ, ಇವರಿಗೆ ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರ ಮುಖಾಂತರ.

*12.* ಕಛೇರಿ ಪ್ರತಿ.